ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 780
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಬೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 25-03-2020
ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾತಂಡಗಳನ್ನು ಮತ್ತು ಕಲಾವಿದರನ್ನು ಗುರುತಿಸಿ ಅವರುಗಳನ್ನು ಪ್ರೋತ್ಸಾಹಿಸುವ ಕಾರ್ಯಗಳು ಸರ್ಕಾರದ ಮಟ್ಟದಲ್ಲಿ ನಡೆಯುತ್ತಿದೆಯೇ;	• ಹೌದು • ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾತಂಡಗಳನ್ನು ಮತ್ತು ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸಲಾಗುತ್ತಿದೆ.
(ಆ)	ಹಾಗಿದ್ದಲ್ಲಿ ಇನ್ನೂ ಬೆಳಕಿಗೆ ಬಾರದ ಹಲವಾರು ಪ್ರತಿಭಾ ಕಲಾತಂಡಗಳೂ ಅವಕಾಶ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಳಕಿಗೆ ಬಾರದ ಪ್ರತಿಭಾ ಕಲಾವಿದರುಗಳನ್ನು/ ಕಲಾತಂಡಗಳನ್ನು ಗುರುತಿಸಿ ಇಲಾಖಾ ಯೋಜನೆಗಳ ಮೂಲಕ ಹಾಗೂ ಇಲಾಖೆಯಿಂದ ನಡೆಯುವ ಕಾರ್ಯಕ್ರಮಗಳಲ್ಲಿ ಅವಕಾಶ ನೀಡಲು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.
(ಇ)	ಈ ಕಲಾವಿದರನ್ನು ಪ್ರೋತ್ಸಾಹಿಸಿ ಅವರುಗಳನ್ನು ಮುಖ್ಯ ವೇದಿಕೆಗೆ ಕರೆತರುವ ಜವಾಬ್ದಾರಿಯನ್ನು ಇಲಾಖಾಧಿಕಾರಿಗಳು ಮಾಡುವಲ್ಲಿ ಸಫಲರಾಗಿದ್ದಾರೆಯೇ; ಹಾಗಿದ್ದಲ್ಲಿ, ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾವಿದರುಗಳು ಅವಕಾಶ ವಂಚಿರತಾಗಿದ್ದು, ಏತಕ್ಕಾಗಿ;	• ಹೌದು. • ಕಲಾವಿದರನ್ನು ಗುರುತಿಸಿ ಕಾರ್ಯಕ್ರಮಗಳಲ್ಲಿ ಕಲಾಪ್ರದರ್ಶನಕ್ಕೆ ಅವಕಾಶ ನೀಡುವ ಜವಾಬ್ದಾರಿಯನ್ನು ಇಲಾಖಾಧಿಕಾರಿಗಳು ನಿರ್ವಹಿಸುತ್ತಿದ್ದಾರೆ. • ವಿವಿಧ ಭಾಗಗಳಲ್ಲಿನ ಕಲಾವಿದರು ಅವಕಾಶ ವಂಚಿತರಾಗಿರುವ ಪ್ರಕರಣಗಳು ಗಮನಕ್ಕೆ ಬಂದಿರುವುದಿಲ್ಲ. ಅಂತ ಕಲಾ ತಂಡಗಳು/ ಕಲಾವಿದರುಗಳು ಗಮನಕ್ಕೆ ಬಂದರೆ ಇಲಾಖೆಯಿಂದ ಏರ್ಪಡಿಸುವ ಕಾರ್ಯಕ್ರಮಗಳಲ್ಲಿ ಕಲಾ ಪ್ರದರ್ಶನಕ್ಕೆ ಅವಕಾಶ ನೀಡಲಾಗುವುದು.
ಈ)	ಇವರುಗಳನ್ನು ಬೆಳಸುವಂತ ಹಾಗೂ ಪ್ರೋತ್ಸಾಹಿಸುವ ಸಲುವಾಗಿ ಅವರಿಗೆ ಭವಿಷ್ಯಕ್ಕೆ ಅನುಗುಣವಾಗಿ ಭದ್ರತೆಯನ್ನು ನೀಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ರೀತಿಯ ಭದ್ರತೆಯನ್ನು ನೀಡಲಾಗಿದೆ; ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು;	ಇಲಾಖೆಯ ಯೋಜನೆಗಳ ಮೂಲಕ ಕಲಾವಿದರನ್ನು ಬೆಳೆಸಲು ಹಾಗೂ ಪ್ರೋತ್ಸಾಹಿಸಲು ಅರ್ಹ ಕಲಾವಿದರಿಗೆ ವಾದ್ಯಪರಿಕರ ಹಾಗೂ ವೇಷಭೂಷಣ ಖರೀದಿಗೆ ಪ್ರೋತ್ಸಾಹ ಧನಸಹಾಯ ನೀಡಲಾಗುತ್ತಿದೆ ಹಾಗೂ 60 ವರ್ಷ ಮೇಲ್ಪಟ್ಟ ಮಾಸಾಶನಕ್ಕೆ ಆಯ್ಕೆಯಾದ ಕಲಾವಿದರಿಗೆ ಪ್ರತಿ ಮಾಹೆ ರೂ.2000ಗಳ ಮಾಸಾಶನ ನೀಡಲಾಗುತ್ತಿದೆ.

....2

ಊ)	ಇಲಾಖೆಯ ವತಿಯಿಂದ ನಡೆದ ಕಾರ್ಯಕ್ರಮಗಳು ಆಯಾ ಜಿಲ್ಲೆಗಳಲ್ಲಿ ಸೂಕ್ತವಾದ ಸಮಯದಲ್ಲಿ ಜರುಗಲಿದೆಯೇ; ಹಾಗಿದ್ದಲ್ಲಿ, ಇನ್ನೂ ಅನೇಕ ಭಾಗಗಳಲ್ಲಿ ಇಲಾಖಾ ವತಿಯಿಂದ ಕೈಗೊಳ್ಳುವ ಕಾರ್ಯಕ್ರಮಗಳು, ಯೋಜನೆಗಳು ಜನಸಾಮಾನ್ಯರನ್ನು ಮುಟ್ಟಿವೆಯೇ; ಮುಟ್ಟಿಸುವಲ್ಲಿ ಸರ್ಕಾರವು ಕೈಗೊಂಡ ದಿಟ್ಟ ನಿರ್ಧಾರಗಳೇನು?	ಇಲಾಖೆಯಿಂದ ಜಿಲ್ಲೆಗಳಲ್ಲಿ ನಡೆಯುವ ಕಾರ್ಯಕ್ರಮಗಳು ಅತಿವೃಷ್ಟಿ, ಬರಗಾಲ ಪ್ರಕೃತಿ ವಿಕೋಪದಂತ ಸಮಯದಲ್ಲಿ ಹೊರತು ಪಡಿಸಿ ಉಳಿದ ಅವದಿಯಲ್ಲಿ ನಿಗಧಿಯಾದ ಸಮಯದಲ್ಲಿ ಕಾರ್ಯಕ್ರಮಗಳು ನಡೆಯುತ್ತವೆ. ಇಲಾಖೆಯಿಂದ ಆಚರಿಸುವ ಕಾರ್ಯಕ್ರಮಗಳನ್ನು ಸೂಕ್ತ ಪ್ರಚಾರದ ಮೂಲಕ ಜನರಿಗೆ ತಲುಪಿಸಲಾಗುತ್ತಿದೆ. ಹಾಗೂ ಪ್ರತಿಯೊಂದು ಕಾರ್ಯಕ್ರಮಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ಜನರು ಪಾಲ್ಗೊಳ್ಳುತ್ತಿದ್ದಾರೆ.

ಸಂಖ್ಯೆ: ಕಸಂಪಾ 79 ಕವಿಸ 2020

(ಸಿ.ಟಿ.ರವಿ)
ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ,
ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು.